**All India Radio: Bangalore**
**National Bulletin In Kannada**
**08.07.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.07.2025  1.10 p.m.**

**<><><><>**

ಮುಖ್ಯಾಂಶಗಳು

1. ಬ್ರೆಸಿಲಿಯಾದಲ್ಲಿಂದು ಬ್ರೆಜಿಲ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. ರಷ್ಯಾ ಹಣಕಾಸು ಸಚಿವರೊಂದಿಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚರ್ಚೆ
3. ಶ್ವೇತ ಭವನದಲ್ಲಿಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್  ಭೇಟಿಯಾದ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು
4. ಬಿಲ್ಲುಗಾರಿಕೆ ವಿಶ್ವಕಪ್ : ನಾಳೆ ಭಾರತದ ದೀಪಿಕಾ ಕುಮಾರಿ, ಜ್ಯೋತಿ ಸುರೇಖಾ ವೆನ್ನಮ್ ಕಣಕ್ಕೆ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬ್ರೆಸಿಲಿಯಾದಲ್ಲಿ ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ರಿಯೊ ಡಿ ಜನ್ಸೆರೊದಲ್ಲಿ ನಡೆದ ೧೭ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಿದ ನಂತರ ಪ್ರಧಾನಿ ಮೋದಿ ಅವರು ಇಂದು ಬೆಳಗ್ಗೆ ಬ್ರೆಸಿಲಿಯಾಕ್ಕೆ ಆಗಮಿಸಿದರು. ಅವರನ್ನು ವಿಮಾನ ನಿಲ್ದಾಣದಲ್ಲಿ ಬ್ರೆಜಿಲ್ ರಕ್ಷಣಾ ಸಚಿವ ಜೋಸ್ ಮ್ಯೂಸಿಯೊ ಮಾಂಟೆರೊ ಫಿಲ್ಹೋ ಆತ್ಮೀಯವಾಗಿ ಬರಮಾಡಿಕೊಂಡರು.  ಸಾಮಾಜಿಕ ಮಾಧ್ಯಮದಲ್ಲಿ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ-ಬ್ರೆಜಿಲ್ ದೃಢ ಪಾಲುದಾರಿಕೆಯಲ್ಲಿ ಹೊಸ ಪ್ರಗತಿ ಸಾಧಿಸುತ್ತಿದೆ. ಪ್ರಧಾನಿ ಮೋದಿ ಅವರು ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ಎರಡೂ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ವಿಸ್ತರಿಸುವ ಕುರಿತು ಪ್ರಧಾನಿ ಮೋದಿ, ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರೊಂದಿಗೆ ದ್ವಿಪಕ್ಷೀಯ ಚರ್ಚೆಗಳನ್ನು ನಡೆಸಲಿದ್ದಾರೆ ಎಂದು ಹೇಳಿದರು. ವ್ಯಾಪಾರ, ರಕ್ಷಣೆ, ಇಂಧನ, ಬಾಹ್ಯಾಕಾಶ, ತಂತ್ರಜ್ಞಾನ, ಕೃಷಿ, ಆರೋಗ್ಯ ಮತ್ತು ಜನರಿಂದ ಜನರಿಗೆ ಸಂಪರ್ಕಗಳನ್ನು ಸಹ ಚರ್ಚೆ

ಒಳಗೊಂಡಿರುತ್ತವೆ. ಇದರ ನಂತರ ನಿಯೋಗ ಮಟ್ಟದ ಮಾತುಕತೆಗಳು ನಡೆಯಲಿವೆ. ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ಬೆಳೆಸಲು ಎರಡೂ ದೇಶಗಳು ಒಪ್ಪಂದಗಳಿಗೆ ಸಹಿ ಹಾಕಲಿವೆ ಎಂದು ಬ್ರೆಸಿಲ್‌ನಲ್ಲಿರುವ ಭಾರತೀಯ ರಾಯಭಾರಿ ದಿನೇಶ್ ಭಾಟಿಯಾ ತಿಳಿಸಿದ್ದಾರೆ. ಭಯೋತ್ಪಾದನೆ ನಿಗ್ರಹದಲ್ಲಿ ಒಟ್ಟಾಗಿ ಕೆಲಸ ಮಾಡುವುದು, ಗೌಪ್ಯ ಮಾಹಿತಿಯನ್ನು ಪರಸ್ಪರ ಹಂಚಿಕೊಳ್ಳುವುದು, ನವೀಕರಿಸಬಹುದಾದ ಇಂಧನ ಮತ್ತು ಕೃಷಿ ಸಂಶೋಧನೆಯಲ್ಲಿ ಸಹಕರಿಸುವುದು ಇವುಗಳ ಮೇಲೆ ದ್ವಿಪಕ್ಷೀಯ ಸಭೆಗಳು ಕೇಂದ್ರೀಕರಿಸುತ್ತವೆ. ದ್ವಿಪಕ್ಷೀಯ ಸಭೆಗಳ ಸಂದರ್ಭದಲ್ಲಿ ನಾಲ್ಕು ಒಪ್ಪಂದಗಳಿಗೆ ಸಹಿ ಹಾಕಲಾಗುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><>

ಐದು ರಾಷ್ಟ್ರಗಳ ಭೇಟಿಯ ಕೊನೆಯ ಹಂತದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ನಮೀಬಿಯಾದ ಅಧ್ಯಕ್ಷ ನೆಟುಂಬೊ ನಂದಿ-ದೈತ್ವಾ ಅವರ ಆಹ್ವಾನದ ಮೇರೆಗೆ ನಾಳೆ ನಮೀಬಿಯಾದ ವಿಂಡ್‌ಹೋಕ್‌ಗೆ ತಲುಪಲಿದ್ದಾರೆ. ಇದು ನಮೀಬಿಯಾಕ್ಕೆ ಪ್ರಧಾನಿ ಮೋದಿ ಅವರ ಮೊದಲ ಭೇಟಿಯಾಗಿದೆ. ಈ ಭೇಟಿಯು ದ್ವಿಪಕ್ಷೀಯ ಸಂಬಂಧದ ವ್ಯಾಪ್ತಿಯನ್ನು ವಿಸ್ತರಿಸುವ ಮತ್ತು ಹೈಡ್ರೋಕಾರ್ಬನ್‌ಗಳು, ಭೂಮಿಯಲ್ಲಿನ ಅಪರೂಪದ ವಸ್ತುಗಳು ಮತ್ತು ಏಕೀಕೃತ ಪಾವತಿ ಪರಸ್ಪರ ಕಾರ್ಯಸಾಧ್ಯತೆಯಂತಹ ವಿವಿಧ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರದ ಹೊಸ ಕ್ಷೇತ್ರಗಳನ್ನು ಅನ್ವೇಷಿಸುವ ಗುರಿಯನ್ನು ಹೊಂದಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><><>

ಸಮಗ್ರ ಬಹುಪಕ್ಷೀಯತೆಯನ್ನು ಮುನ್ನಡೆಸಲು ಬ್ರಿಕ್ಸ್ ಒಂದು ಪ್ರಮುಖ ವೇದಿಕೆಯಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ವಿಶೇಷವಾಗಿ ಜಾಗತಿಕ ಸಂಸ್ಥೆಗಳು ನ್ಯಾಯಸಮ್ಮತತೆ ಮತ್ತು ಪ್ರಾತಿನಿಧ್ಯದ ಬಿಕ್ಕಟ್ಟನ್ನು ಎದುರಿಸುತ್ತಿರುವಾಗ, ಸಹಕಾರವನ್ನು ಬಲಪಡಿಸುವ, ವಿಶ್ವಾಸಾರ್ಹ ಸುಧಾರಣೆಗಳನ್ನು ಪ್ರತಿಪಾದಿಸುವ ಮತ್ತು ಜಾಗತಿಕ ದಕ್ಷಿಣದ ಧ್ವನಿಯನ್ನು ವರ್ಧಿಸುವ ಮೂಲಕ ಅವು ಮಾದರಿಯಾಗಿ ಮುನ್ನಡೆಸಬೇಕು ಎಂದು ಅವರು ಪ್ರತಿಪಾದಿಸಿದರು. ರಿಯೊ ಡಿ ಜನ್ಯೆರೊದಲ್ಲಿ ನಡೆದ ಬ್ರಿಕ್ಸ್ ರಾಷ್ಟ್ರಗಳ ಹಣಕಾಸು ಸಚಿವರು ಮತ್ತು ಕೇಂದ್ರ ಬ್ಯಾಂಕ್ ಗವರ್ನರ್‌ಗಳ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಬಲವಾದ ದೇಶೀಯ ಬೇಡಿಕೆ, ವಿವೇಕಯುತ ಸ್ಥೂಲ ಆರ್ಥಿಕ ನಿರ್ವಹಣೆ ಮತ್ತು ಉದ್ದೇಶಿತ ಹಣಕಾಸು ಕ್ರಮಗಳ ಸಂಯೋಜನೆಯ ಮೂಲಕ ಭಾರತದ ಸ್ಥಿತಿಸ್ಥಾಪಕತ್ವವನ್ನು ಸಚಿವೆ ನಿರ್ಮಲಾ ಸೀತಾರಾಮನ್ ಒತ್ತಿ

ಹೇಳಿದರು. ವ್ಯಾಪಾರ ಮತ್ತು ಹಣಕಾಸು ನಿರ್ಬಂಧಗಳಿಗೆ ಭಾರತದ ನೀತಿ ಪ್ರತಿಕ್ರಿಯೆಯು ಮಾರುಕಟ್ಟೆಗಳನ್ನು ವೈವಿಧ್ಯಗೊಳಿಸುವುದು, ಮೂಲಸೌಕರ್ಯ ನೇತೃತ್ವದ ಬೆಳವಣಿಗೆಯನ್ನು ಉತ್ತೇಜಿಸುವುದು ಹಾಗೂ ಸ್ಪರ್ಧಾತ್ಮಕತೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ರಚನಾತ್ಮಕ ಸುಧಾರಣೆಗಳನ್ನು ಜಾರಿಗೆ ತರುವುದರ ಮೇಲೆ ಕೇಂದ್ರೀಕರಿಸಿದೆ ಎಂದು ಹಣಕಾಸು ಸಚಿವರು ಹೇಳಿದ್ದಾರೆ. ರಷ್ಯಾದ ಹಣಕಾಸು ಸಚಿವ ಆಂಟನ್ ಸಿಲುವಾನೋವ್ ಅವರೊಂದಿಗಿನ ಪ್ರತ್ಯೇಕ ಸಭೆಯಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್, ದ್ವಿಪಕ್ಷೀಯ ಸಹಕಾರದ ವಿಷಯಗಳು, ವಿಶೇಷವಾಗಿ ಹಣಕಾಸು ವಲಯದಲ್ಲಿ, ಹೊಸ ಅಭಿವೃದ್ಧಿ ಬ್ಯಾಂಕ್‌ಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಿದರು. ನಂತರ ಚೀನಾ ಹಣಕಾಸು ಸಚಿವ ಲ್ಯಾನ್ ಫೋ ಆನ್ ಅವರನ್ನು ಭೇಟಿಯಾದರು. ಭಾರತ ಮತ್ತು ಚೀನಾ ವಿಶ್ವದ ಎರಡು ದೊಡ್ಡ ಮತ್ತು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಗಳಾಗಿ, ಸಮಗ್ರ ಜಾಗತಿಕ ಬೆಳವಣಿಗೆ ಮತ್ತು ನಾವೀನ್ಯತೆಯನ್ನು ಹೆಚ್ಚಿಸಲು ಅನನ್ಯ ಸ್ಥಾನದಲ್ಲಿವೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

<><><>

ಶಾಂತಿ ಸ್ಥಾಪಿಸುವಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪಾತ್ರವನ್ನು ಉಲ್ಲೇಖಿಸಿ ನೊಬೆಲ್ ಶಾಂತಿ ಪ್ರಶಸ್ತಿಗೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ನಾಮನಿರ್ದೇಶನ ಮಾಡಿದ್ದಾರೆ. ಅಮೆರಿಕದ ಶ್ವೇತಭವನದಲ್ಲಿ ಇಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾದ ಅವರು, ನೊಬೆಲ್ ಸಮಿತಿಗೆ ಕಳುಹಿಸಿದ ನಾಮನಿರ್ದೇಶನ ಪತ್ರದ ಪ್ರತಿಯನ್ನು ವೈಯಕ್ತಿಕವಾಗಿ ಟ್ರಂಪ್ ಅವರಿಗೆ ಹಸ್ತಾಂತರಿಸಿದರು. ವಿಶ್ವದಲ್ಲಿ ವಿಶೇಷವಾಗಿ ಪಶ್ಚಿಮ ಏಷ್ಯಾದಲ್ಲಿ ಶಾಂತಿ ಮತ್ತು ಭದ್ರತೆಯನ್ನು ಉತ್ತೇಜಿಸುವಲ್ಲಿ, ಟ್ರಂಪ್ ಅವರ ಪ್ರಯತ್ನಗಳನ್ನು ಬೆಂಜಮಿನ್ ನೆತನ್ಯಾಹು ಶ್ಲಾಘಿಸಿದರು. ಇದೇ ವೇಳೆ, ಗಾಜಾದಿಂದ ಪ್ಯಾಲೆಸ್ಟೀನಿಯನ್ನರನ್ನು ಸ್ಥಳಾಂತರಿಸಲು ಮತ್ತು ಸಂಘರ್ಷಪೀಡಿತ ಗಾಜಾ ಪಟ್ಟಿಯನ್ನು ಅಭಿವೃದ್ಧಿಪಡಿಸುವ ಇಸ್ರೇಲ್ ಪ್ರಸ್ತಾಪಕ್ಕೆ ಅಮೆರಿಕ ಅಧ್ಯಕ್ಷರು ಬೆಂಬಲ ಸೂಚಿಸಿದರು.

<><><>

ಅಮೆರಿಕವು ತನ್ನ ಪರಸ್ಪರ ಸುಂಕಗಳ ಅನುಷ್ಠಾನವನ್ನು ಆಗಸ್ಟ್ ೧ ಕ್ಕೆ ಮುಂದೂಡಿದೆ. ಇದು ಬಾಧಿತ ದೇಶಗಳಿಗೆ ಅಮೆರಿಕದೊಂದಿಗೆ ಮಧ್ಯಂತರ ವ್ಯಾಪಾರ ಒಪ್ಪಂದಗಳನ್ನು ಅಂತಿಮಗೊಳಿಸಲು ಹೆಚ್ಚುವರಿ ಸಮಯವನ್ನು ಒದಗಿಸುತ್ತದೆ. ಏಪ್ರಿಲ್ ೨ ರಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

ಘೋಷಿಸಿದ ಸುಂಕಗಳಿಗೆ ಭಾರತ ಸೇರಿದಂತೆ ಹಲವಾರು ರಾಷ್ಟ್ರಗಳು ಗುರಿಯಾಗಬೇಕಿತ್ತು. ಆದರೆ ಅವುಗಳ ಅನುಷ್ಠಾನವನ್ನು ೯೦ ದಿನಗಳವರೆಗೆ ಮುಂದೂಡಿತ್ತು. ಪ್ರಸ್ತುತ ಪರಸ್ಪರ ಸುಂಕ ಕ್ರಮವು ಮುಂದಿನ ತಿಂಗಳ ೧ ರಿಂದ ಜಾರಿಗೆ ಬರಲಿದೆ.

<><><>

ತಮಿಳುನಾಡಿನ ಕಡಲೂರು ಜಿಲ್ಲೆಯ ಸೆಮ್ಮಂಕುಪ್ಪಂನಲ್ಲಿರುವ ಮಾನವರಹಿತ ರೈಲ್ವೆ ಲೆವೆಲ್ ಕ್ರಾಸಿಂಗ್‌ನಲ್ಲಿ ಇಂದು ಬೆಳಗ್ಗೆ ರೈಲಿಗೆ ಶಾಲಾ ವಾಹನ ಡಿಕ್ಕಿ ಹೊಡೆದ ಪರಿಣಾಮ ಒಂದೇ ಕುಟುಂಬದ ಇಬ್ಬರು ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ. ಈ ಅಪಘಾತಕ್ಕೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಕ್ಕೆ ತಲಾ ೫ ಲಕ್ಷ ರೂಪಾಯಿ, ಗಂಭೀರವಾಗಿ ಗಾಯಗೊಂಡವರಿಗೆ ತಲಾ ೧ ಲಕ್ಷ ರೂಪಾಯಿ ಮತ್ತು ಗಾಯಗೊಂಡ ಇತರರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಪುದುಚೇರಿಯ ಜಿಪ್ಮರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಕಾವಲುಗಾರನನ್ನು ಅಮಾನತುಗೊಳಿಸಲಾಗಿದೆ. ಘಟನೆಯ ಬಗ್ಗೆ ತನಿಖೆಗೆ ಆದೇಶಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><>

ಹೈದರಾಬಾದ್ ಬಳಿಯ ಪಶಮೈಲಾರಂನಲ್ಲಿರುವ ಸಿಗಾಚಿ ಇಂಡಸ್ಟ್ರೀಸ್ ಲಿಮಿಟೆಡ್‌ನ ಉತ್ಪಾದನಾ ಘಟಕದಲ್ಲಿ ಸಂಭವಿಸಿದ ಸ್ಫೋಟದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೪೪ ಕ್ಕೆ ಏರಿಕೆಯಾಗಿದೆ. ಸಂಗಾರೆಡ್ಡಿ ಜಿಲ್ಲೆಯ ಎರಡು ವಿಭಿನ್ನ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಇಬ್ಬರು ಕಾರ್ಮಿಕರು ಇಂದು ಅಸುನೀಗಿದ್ದಾರೆ. ಹದಿನಾರು ಕಾರ್ಮಿಕರು ಇನ್ನೂ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><>

ಈಶಾನ್ಯ ರಾಜ್ಯಗಳಲ್ಲಿ ಸಾಗರ ವಲಯ ಮತ್ತು ಜಲಮಾರ್ಗಗಳ ಅಭಿವೃದ್ಧಿಗೆ ೫ ಸಾವಿರ ಕೋಟಿ ರೂಪಾಯಿ ಮೌಲ್ಯದ ಹಲವು ಉಪಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಕೇಂದ್ರ ಬಂದರು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನಾವಾಲ್ ತಿಳಿಸಿದ್ದಾರೆ.

<><><>

ಬಿಲ್ಲುಗಾರಿಕೆಯಲ್ಲಿ, ವಿಶ್ವದ ಮಾಜಿ ನಂ. ೧ ದೀಪಿಕಾ ಕುಮಾರಿ ಮತ್ತು ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತೆ ಜ್ಯೋತಿ ಸುರೇಖಾ ವೆನ್ನಮ್ ಅವರು ನಾಳೆ ಸ್ಪೇನ್‌ನ ಮ್ಯಾಡ್ರಿಡ್‌ನಲ್ಲಿ ಆರಂಭವಾಗಲಿರುವ ೨೦೨೫ರ ಬಿಲ್ಲುಗಾರಿಕೆ ವಿಶ್ವಕಪ್ ಹಂತ ೪ ರಲ್ಲಿ ಭಾರತದ ಸವಾಲನ್ನು ಮುನ್ನಡೆಸಲಿದ್ದಾರೆ. ಈ ವರ್ಷದ ವಿಶ್ವಕಪ್ ಸರಣಿಯ ಅಂತಿಮ ಹಂತದಲ್ಲಿ ೪೯ ರಾಷ್ಟ್ರಗಳಿಂದ ೩೩೬ ಬಿಲ್ಲುಗಾರರು ಭಾಗವಹಿಸಲಿದ್ದಾರೆ.

<><><><>

ವಿಂಬಲ್ಡನ್ ಟೆನಿಸ್ ಪಂದ್ಯಾವಳಿಯಲ್ಲಿ ವಿಶ್ವದ ನಂಬರ್ ಒನ್ ಆಟಗಾರ ಜಾನಿಕ್ ಸಿನ್ನರ್ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಎದುರಾಳಿ ಆಟಗಾರ ಗ್ರಿಗರ್ ಡಿಮಿತ್ರೋವ್ ಗಾಯಗೊಂಡ ಕಾರಣ ಸಿನ್ನರ್ ಮುಂದಿನ ಹಂತ ಪ್ರವೇಶಿಸುವಂತಾಯಿತು. ಡಿಮಿತ್ರೋವ್ ಅವರು ೬-೩, ೭-೫ ಸೆಟ್‌ಗಳಲ್ಲಿ ಸಿನ್ನರ್ ವಿರುದ್ಧ ಗೆಲುವು ಸಾಧಿಸಿದರೂ ಇನ್ನೇನು ಅವರು ಮತ್ತೊಂದು ಸೆಟ್‌ನಲ್ಲಿ ಗೆದ್ದು ೧೦ ವರ್ಷಗಳ ಬಳಿಕ ವಿಂಬಲ್ಡನ್ ಕ್ವಾರ್ಟರ್ ಫೈನಲ್ ಪ್ರವೇಶಿಸುವ ತವಕದಲ್ಲಿದ್ದರು. ಆದರೆ ಗಾಯಗೊಂಡು ಪಂದ್ಯದಿಂದ ಹೊರಗುಳಿದ ಪರಿಣಾಮ ಅವರ ಕನಸು ಭಗ್ನಗೊಂಡಿತು. ಆದರೆ ಇದರಿಂದ ಸಿನ್ನರ್ ಮುಂದಿನ ಹಂತ ಪ್ರವೇಶಿಸಲು ಸಾಧ್ಯವಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>